ಈ) ಹೌದು. 2010–11ನೇ ಜನವರಿ ಮಾಹೆಯವರೆಗೆ ಕರ್ನಾಟಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆ ವತಿಯಿಂದ ಬಾಗೇಪಲ್ಲಿ ತಾಲ್ಲೂಕಿನಲ್ಲಿ ಒಟ್ಟು 1,732 ಹಾಗೂ ಗುಡಿಬಂಡೆ ತಾಲ್ಲೂಕಿನಲ್ಲಿ ಒಟ್ಟು 1,058 ಮಿಶ್ರತಳಿ ಹಸು ಮತ್ತು ಎಮ್ಮೆಗಳನ್ನು ವಿಮೆಗೆ ಒಳಪಡಿಸಲಾಗಿದೆ.

**ಚಿಕ್ಕ ಬಳ್ಳಾಪುರ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರು ಯೋಜನೆ**

**531 (479) ಸಂಪಂಗಿ ಎನ್. (ಬಾಗೇಪಲ್ಲಿ) :** ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಅಧಿಕೃತವಾಗಿರುವುದರಿಂದ ಈ ಭಾಗದ ಜನತೆಯು ತೀವ್ರ ರೀತಿಯ ವಿವಿಧ ಕಾಯಿಲೆಗಳಿಗೆ ತುತ್ತಾಗುತ್ತಿದ್ದು, ಶುದ್ಧ ಕುಡಿಯುವ ನೀರಿನ ಸೌಕರ್ಯ ಒದಗಿಸಲು ಹಾಗೂ ಉದ್ಯೋಗ ಸೃಷ್ಟಿಸಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು)?

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :**

ಅ) ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ತಾಲ್ಲೂಕಿನ 219, ಗುಡಿಬಂಡೆ ತಾಲ್ಲೂಕಿನ 73 ಜನವಸತಿಗಳ ಕುಡಿಯುವ ನೀರಿನ ಜಲಮೂಲಗಳಲ್ಲಿ ಅಧಿಕ ಫ್ಲೋರೈಡ್ ಅಂಶ ಕಂಡು ಬಂದಿದೆ. ಸದರಿ ತಾಲ್ಲೂಕುಗಳ ಜನವಸತಿಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ವಂಡಮಾನ್ ಕೆರೆ ಹಾಗೂ ಪರಗೋಡು ಜಲಾಶಯ ಆಧಾರಿತ ಬಹು ಗ್ರಾಮ ಯೋಜನೆಗಳನ್ನು ರೂ.32.83 ಕೋಟಿ ಅಂದಾಜು ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಇದರ ಜೊತೆಗೆ, BAIF ಸಂಸ್ಥೆ ಮುಖೇನ ಸಚೇತನ ಯೋಜನೆಯಡಿ ಬಾಗೇಪಲ್ಲಿ ತಾಲ್ಲೂಕಿನ 32 ಗ್ರಾಮಗಳಿಗೆ ಮಳೆ ನೀರು ಕೊಯ್ಲು ವಿಧಾನ ಅಳವಡಿಸಿ, ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. ಅಂತರ್ಜಲ ಅಭಿವೃದ್ಧಿ ಪಡಿಸುವ ಸಲುವಾಗಿ ನಿರಂತರತೆ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಸೇರಿ ಒಟ್ಟು

ರೂ.6.744 ಕೋಟಿ ಅಂದಾಜಿನ 451 ಕಾಮಗಾರಿಗಳನ್ನು ಅನುಷ್ಠಾನಗೊಳಿಸ ಲಾಗುತ್ತಿದೆ. ಶಿಡ್ಲಘಟ್ಟ ಮತ್ತು ಗುಡಿಬಂಡೆ ತಾಲ್ಲೂಕುಗಳ 57 ಕೆರೆಗಳ ಅಭಿವೃದ್ಧಿಗಾಗಿ ರೂ.5.88 ಕೋಟಿ ಅಂದಾಜಿನ ಯೋಜನೆ ಅನುಷ್ಠಾನ ಕೈಗೊಳ್ಳಲಾಗಿದೆ. ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಸ್ಥಳೀಯ ಗ್ರಾಮಸ್ಥರಿಗೆ ಉದ್ಯೋಗ ಒದಗಿಸಲು ಮತ್ತು ಗ್ರಾಮದ ಅಭಿವೃದ್ಧಿಗೆ ಪೂರಕವಾಗಿ ಅಗತ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

**ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮದ್ಯಮಾರಾಟ ಪರವಾನಗಿ**

**532 (480) ಶ್ರೀ ಎನ್. ಸಂಪಂಗಿ (ಬಾಗೇಪಲ್ಲಿ)** : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಎಷ್ಟು ಮಂದಿಗೆ ವೈನ್‌ಶಾಪ್ ಹಾಗೂ ಬಾರ್‌ಗಳಿಗೆ ಪರವಾನಗಿಯನ್ನು ನೀಡಲಾಗಿದೆ (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು);

ಆ) ಸರ್ಕಾರಕ್ಕೆ ಇದರಿಂದ ಸಂದಾಯವಾಗುತ್ತಿರುವ ಲಾಭ ಎಷ್ಟು; ಹಾಗೂ ಲಾಭದ ಹಣವನ್ನು ಯಾವ ಯಾವ ಯೋಜನೆಗೆ ಖರ್ಚು ಮಾಡಲಾಗುವುದು; (ವಿವರ ಒದಗಿಸುವುದು)

ಇ) ಬಾಗೇಪಲ್ಲಿ–ಗುಡಿಬಂಡೆ ತಾಲ್ಲೂಕಿನಲ್ಲಿ ಹೊಸದಾಗಿ ಎಂ.ಎಸ್.ಐ.ಎಲ್ ನಿಂದ ಮದ್ಯ ಮಾರಾಟ ಮಾಡಲು ಎಷ್ಟು ಪರವಾನಗಿ ಯನ್ನು ಕಲ್ಪಿಸಲಾಗಿದೆ. ಇದಕ್ಕೆ ಅನುಸರಿಸುವ ಸರ್ಕಾರದ ಮಾನದಂಡವೇನು; (ಫಲಾನುಭವಿಗಳ ವಿವರ ಒದಗಿಸುವುದು);

ಈ) ಸರ್ಕಾರಕ್ಕೆ ಕಳೆದ ಎರಡು ವರ್ಷಗಳಿಂದ ಅಬಕಾರಿ ಮಾರಾಟದಲ್ಲಿ ಬಂದಿರುವಂತಹ ಲಾಭ ಎಷ್ಟು (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು)?

**ಶ್ರೀ ಎಂ.ಪಿ. ರೇಣುಕಾ ಚಾರ್ಯ (ಅಬಕಾರಿ ಸಚಿವರು)** :

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವೈನ್‌ಶಾಪ್ ಮತ್ತು ಬಾರ್ ಪರವಾನಗಿ ಪಡೆದವರ ವಿವರಗಳು ಈ ಕೆಳಕಂಡಂತಿದೆ.